# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 836 (808) |
| ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರು (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 24.08.2026 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಧಾನಸೌಧದ ಅವರಣದಲ್ಲಿ ನಿಜ ಶರಣ ಅಂಬಿಗರ ಚಾಡಯ್ಯನವರ ಪ್ರತಿಮೆಯನ್ನು ಸ್ಥಾಪಿಸಬೇಕೆನ್ನುವುದು ಸಮುದಾಯದ ಎಲ್ಲಾ ವರ್ಗದವರ ಬೇಡಿಕೆಯಾಗಿದ್ದರೂ, ಸರ್ಕಾರ ತೀರ್ಮಾನ ಕೈಗೊಳ್ಳುವಲ್ಲಿ ವಿಳಂಭ ದೋರಣೆ ಅನುಸರಿಸುತ್ತಿರಲು ಕಾರಣವೇನು; | ಹನ್ನೆರಡನೇ ಶತಮಾನದ ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರು ಒಬ್ಬರು. ಭಿನ್ನ ಹಾಗೂ ವಿಶಿಷ್ಟ ವ್ಯಕ್ತಿತ್ವದ ಅಂಬಿಗರ ಚೌಡಯ್ಯನವರು ನೇರ ನಿರ್ಭೀತ ನುಡಿಗಳಿಗೆ ಪ್ರಸಿದ್ಧರಾಗಿದ್ದು, ಅಂಬಿಗರ ಚೌಡಯ್ಯ ಎಂಬ ಅಂಕಿತನಾಮದಿಂದಲೇ ವಚನಗಳನ್ನು ರಚಿಸಿರುತ್ತಾರೆ.<br><br>ಸರ್ಕಾರದ ಸುತ್ತೋಲೆ ಸಂಖ್ಯೆ ಕಸಂವಾಪ್ರ 564 ಕಸಧ 2012 ದಿನಾಂಕ:11.06.2012ರಲ್ಲಿ, ಸರ್ಕಾರದ / ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ / ಶರಣರ, ಜನ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆಯನ್ನು ಸ್ಥಾಪಿಸುವುದನ್ನು ನಿರ್ಬಂಧಿಸಲಾಗಿದೆ.<br><br>ಮುಂದುವರೆದು, ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾದ SLP(C) ಸಂಖ್ಯೆ 8519/2006ರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:18.01.2013ರಂದು ನೀಡಿರುವ ತೀರ್ಪಿನಲ್ಲಿರುವ ಒಂದು ಅಂಶವು ಈ ಕೆಳಕಂಡಂತೆ ಇರುತ್ತದೆ.<br><br>" ........ State Government shall not grant any permission for installation of any statue or construction of any structure in public roads, pavements, sideways and other public utility places".<br><br>ಮೇಲ್ಕಂಡ ಸುತ್ತೋಲೆ ಹಾಗೂ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನನ್ವಯ ಸಾರ್ವಜನಿಕ ಸ್ಥಳದಲ್ಲಿ ಪ್ರತಿಮೆ ಸ್ಥಾಪನೆಗೆ ಅವಕಾಶವಿರುವುದಿಲ್ಲ.<br><br>ಆದಾಗ್ಯೂ, ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ವಿಧಾನಸೌಧ / ವಿಕಾಸಸೌಧದ ಆವರಣದಲ್ಲಿ ಸ್ಥಾಪಿಸಲು ಸ್ಥಳವನ್ನು ಗುರುತು ಮಾಡುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. |
| ಆ) | ಎಂದಿನಿಂದ ಕಾರ್ಯಾರಂಭಿಸಲಾಗುವುದು? (ಮಾಹಿತಿ ನೀಡುವುದು) | |

ಸಂಖ್ಯೆ: ಕಸಂವಾ 80 ಕವಿಸ 2026

(ಶಿವರಾಜ ಎಸ್. ತಂಗಡಗಿ)
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು